# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್**

ದಿನಾಂಕ: 18-10-2022

ಸ.ಕಾ.ನಿ.ಅ/ಪುನ/ಪಿಆರ್/ 11 /2022-23

**ದಿನಾಂಕ:- 18-10-2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:-**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ವಾರ್ಡ್ ವ್ಯಾಪ್ತಿಯಲ್ಲಿನ ಕ್ಲೀವ್‌ಲ್ಯಾಂಡ್ ರಸ್ತೆ, ಕೆಂಚಪ್ಪ ರಸ್ತೆ, ರಾಬರ್ಟ್‌ಸನ್ ರಸ್ತೆ, ಸ್ಟೀಫನ್ಸ್ ಮುಖ್ಯರಸ್ತೆ, ಪ್ರಾಮಿನೆಡ್ ರಸ್ತೆ, ಮತ್ತು ಮಾಸ್ಕ್ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ತುರ್ತಾಗಿ ಮುಚ್ಚಲು ಸೂಚಿಲಾಗಿರುತ್ತದೆ.
2. ಮಾಸ್ಕ್ ರಸ್ತೆಯ ಉರ್ದು ಶಾಲೆಯ ಹತ್ತಿರದ ಪಾದಚಾರಿ ಮಾರ್ಗ ದುರಸ್ಥಿಯಾಗಿದ್ದು, ಸದರಿ ಪಾದಚಾರಿ ಮಾರ್ಗವನ್ನು ಅಭಿವೃದ್ಧಿ ಪಡಿಸಲು ತಿಳಿಸಲಾಯಿತು.
3. ನೇತಾಜಿ ರಸ್ತೆಯ ಬದಿಯಲ್ಲಿ ಬಿದ್ದಿರುವ ಡೆಬ್ರಿಸ್‌ಅನ್ನು ತೆರವುಗೊಳಿಸಲು ಸಂಬಂಧಪಟ್ಟ ವಾರ್ಡಿನ ಅಭಿಯಂತರರಿಗೆ ಸೂಚಿಸಲಾಯಿತು.
4. ವಾರ್ಡ್ ವ್ಯಾಪ್ತಿಯ ವಿಲ್ಲರ್ ರಸ್ತೆಯ ಕೊಮಲ ಹೋಟೇಲ್ ಜಂಕ್ಷನ್ ಹತ್ತಿರ ಕೈಗೊಂಡಿದ Intensive Cleaning ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು.
5. ಬಾರಿ ಸುರಿದ ಮಳೆಯಿಂದಾಗಿ ಈಸ್ಟ್ ಪುಟ್‌ಬಾಲ್ ಆಟದ ಮೈದಾನದ ಕಾಂಪೌಂಡ್ ಗೋಡೆಯು ಬಿದ್ದಿದ್ದು, ಸದರಿ ಕಾಂಪೌಂಡ್ ಗೋಡೆಯ ದುರಸ್ಥಿ ಕಾಮಗಾರಿಯು ಪ್ರಗತಿಯಲ್ಲಿರುವ ಬಗ್ಗೆ ತಿಳಿಸಲಾಯಿತು.
6. ಸ್ಪೇನ್ಸರ್ ರಸ್ತೆಯ ಚರಂಡಿಗಳಲ್ಲಿ ಮಳೆಯಿಂದಾಗಿ ಹೂಳು ತುಂಬಿದ್ದು, ಸದರಿ ಚರಂಡಿಗಳಲ್ಲಿ ಹೂಳು ತೆಗೆಯು ಕಾಮಗಾರಿಯನ್ನು ಕೈಗೊಳ್ಳಲು ಸಂಬಂಧಪಟ್ಟ ವಾರ್ಡಿನ ಅಭಿಯಂತರರಿಗೆ ಸೂಚಿಸಲಾಯಿತು.
7. ಮೋರ್ ರಸ್ತೆಯಲ್ಲಿರುವ ಮಾರ್ಕೆಟ್ ಒಳಗಡೆ ಸ್ವಚ್ಛಗೊಳಿಸಲು ಸಂಬಂಧಪಟ್ಟ ವಾರ್ಡಿನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ನೋಡಲ್ ಅಧಿಕಾರಿಗಳು** | **ಕಾರ್ಯದರ್ಶಿ**

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಪುಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned with CamScanner